62

ಮೈಸೂರ ಗೆಜಿಟ್ಟು.

ಸಂ. 42.] ಸರ್ಕಾರದಿಂದ ಪ್ರಾಯಿಷ್ ಆದ್ದು [ನಂ. 5.

ಬೆಂಗಳೂರು, ಗುರುವಾರ, ಜನವರಿ ತಾ॥ 31, ಸನ್ 1907.

ಈ ಭಾಗಗಳನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಬೇರೆ ಬೇರೆಯಾಗಿ ಪುಟಸಂಖ್ಯೆ ಕೊಡಲ್ಪಟ್ಟಿತ್ತು.

ವಿಷಯ ಸೂಚಿಕೆ.

1ನೆ ಭಾಗ—ಮೈಸೂರು ಸೀಮೆಯ ಶ್ರೀಮನ್ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

2ನೆ ಭಾಗ—ರೆಸಿಡೆಂಟರು, ಚೀಫ್ ಜಡ್ಜಿಯವರು, ಸರ್ವೆ ಇನ್ಸ್ಟಾಂ ಸೂಪರಿಂಟೆಂಡೆಂಟರು, ರೆವಿನ್ಯೂ ಕಮ್ಮಿಷನರವರು, ಕಲೆಕ್ಟೋಲರವರು, ಪಬ್ಲಿಕ್ ವರ್ಕ್ಸ್ ಆಫಿಸರ್‌ಗಳು, ಫಾರೆಸ್ಟು, ರೆಜಿಸ್ಟ್ರೇರ್ಸ ವ ಎಡ್ಯುಕೇಷನ್ ಇನ್ಸ್‌ಪೆಕ್ಟರ್ ಜನರಲ್ಲವರು, ಮ್ಯುನಿಸಿಪಲ್ ಬೋರ್ಡು ಪ್ರಸಿಡೆಂಟರು, ಡಿಸ್ಟ್ರಿಕ್ಟು ವ ಸೆಷನ್ ಜಡ್ಜಿರು, ಡಿಸ್ಟ್ರಿಕ್ಟು ಡೆಪ್ಯುಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜಿರು, ಪೋಲೀಸ್ ಸೂಪರಿಂಟೆಂಡೆಂಟರು, ಫಾರೆಸ್ಟು ಆಫಿಸರ್‌ಗಳು ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗ್ಗೈರೆ ಕಾಲಸ್ಥಿತೀ ರಿಪೋರ್ಟುಗಳು; ಪೋಸ್ಟಫೀಸ್ ನೋಟಿಸುಗಳು.

3ನೆ ಭಾಗ—ಲೆಜಿಸ್ಲೇಟಿವ್ ರೆಗ್ಯುಲೇಷನ್‌ಗಳು ಮತ್ತು ಅವುಗೆ ಳಂತೆ ಆದ ನಿಬಂಧನೆಗಳು.

4ನೆ ಭಾಗ—ಸರ್ಕಾರೀ ಕಾಗದ ಪತ್ರಗಳು.

1ನೆ ಭಾಗ.

ಮೈಸೂರು ಸೀಮೆಯ ಶ್ರೀಮನ್ ಮಹಾರಾಜಾ ಸರ್ಕಾರದಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಜನರಲ್ ಮತ್ತು ರೆವಿನ್ಯೂ.

ತಾರೀಖು 10ನೆ ಜನವರಿ 1907.

ನಂ. 6185—ಸ್ಯಾನಿಟರಿ 66 - 06-24, ಸಮಸ್ತ ಜನರ ತಿಳಿವಳಿಕೆಯ ಬಗ್ಗೆ ಇದರಿಂದ ಪ್ರಸಿದ್ಧಪಡಿಸುವುದೇನಂದರೆ:—ಹಾಸನ ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸುವ ಪ್ರದೇಶಗಳು ಎಪಿಡೆಮಿಕ್ ಡಿಸೀಸಸ್ ರೆಗ್ಯುಲೇಷನ್ ಎಂಬ ಸಾಂಕ್ರಾಮಿಕ ಜಾಡ್ಯಗಳಿಗೆ ಸಂಬಂಧಪಟ್ಟ ಕಾನೂನನ್ನು ಅನುಸರಿಸಿ 1898ನೆಯ ವರ್ಷದ ಫೆಬ್ರವರಿ 10ನೆಯು ತಾರೀಖಿನ ನಂಬರ್ 9383—ಮಿಸಲೇನಿಯಸ್ ಫೈಲ್ 21—96 ಮತ್ತು ನಂಬರ್ 9384—ಮಿಸಲೇನಿಯಸ್ ಫೈಲ್ 21 96 ಈ ನಂಬರುಗಳ ಇಸ್ತಿಹಾರ್‌ನಾಮೆಗಳೊಡನೆ ಪ್ರಕಟಿಸಲ್ಪಟ್ಟ ರೆಗ್ಯುಲೇಷನುಗಳ ಉದ್ದೇಶಾರ್ಥವಾಗಿ ಪ್ಲೇಗು ತಗುಲಿದ ಪ್ರದೇಶಗಳೆಂದು ಎಣಿಸಲ್ಪಡುವವು.

ಸ್ಥಳ.	ತಾಲ್ಲೂಕು.
ಜೋಡಿ ಕಟ್ಟಿಗೆರೆ	ಬೇಲೂರು
ಬಾಣಾವಾರ	ಅರಸೀಕೆರೆ

ತಾರೀಖು 11ನೆ ಜನವರಿ 1907.

ನಂ. 6213—ಸ್ಯಾನಿಟರಿ 156 - 06—2, ಕೋಲಾರ ಡಿಸ್ಟ್ರಿಕ್ಟು ಮುಳಬಾಗಲು ತಾಲ್ಲೂಕಿನ ಅವನಿ ಶ್ರೀರಾಮುಲಿಂಗೇಶ್ವರ ಸ್ವಾಮಿಯವರ ರಥೋತ್ಸವ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನವೆಂಬರ್ ಎಪಿಡೆಮಿಕ್ ಡಿಸೀಸಸ್ ರೆಗ್ಯುಲೇಷನೆಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ಉಪಯೋಗಿಸಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರು 1907ನೆಯ ವರ್ಷದ ಫೆಬ್ರವರಿ 11ನೆ ತಾರೀಖಿನಿಂದ 1907ನೆ ಇಸವಿ ಫೆಬ್ರವರಿ 21ನೆ ತಾರೀಖಿನವರೆಗೆ ಉಭಯ ದಿನಗಳೂ ಸೇರಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ರಥೋತ್ಸವಕ್ಕೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.